ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

(5)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 9/3/21

# ಮೊದಲ ಬಾರಿಗೆ ಬಜೆಟ್ ಬಹಿಷ್ಕರಿಸಿದ ವಿಪಕ್ಷ ಕಾಂಗ್ರೆಸ್

## ಇದೊಂದು ಅನೈತಿಕ ಸರ್ಕಾರ ಎಂದು ಕಿಡಿಕಾರಿದ ಸಿದ್ದರಾಮಯ್ಯ

• ಕನ್ನಡಪ್ರಭ ವಾರ್ತೆ ಬೆಂಗಳೂರು

ರಾಜ್ಯದ ರಾಜಕೀಯ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಸರ್ಕಾರದ ಬಜೆಟ್ ಮಂಡನೆ ವಿರೋಧಿಸಿ ಪ್ರಮುಖ ಪ್ರತಿಪಕ್ಷ ಸಭಾತ್ಯಾಗ ಮಾಡಿದ ಘಟನೆಗೆ ವಿಧಾನಸಭೆ ಸಾಕ್ಷಿಯಾಯಿತು.

ಬಜೆಟ್ ಮಂಡನೆ ವಿರೋಧಿಸಬೇಕೆಂದು ಮುಂಚಿತವಾಗಿಯೇ ತೀರ್ಮಾನಿಸಿದ್ದ ಕಾಂಗ್ರೆಸ್ ಸದಸ್ಯರು ಕೈಗೆ ಕಪ್ಪು ಬಟ್ಟೆ ಧರಿಸಿಯೇ ಸದನಕ್ಕೆ ಆಗಮಿಸಿದ್ದರು. ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಬಜೆಟ್ ಭಾಷಣ ಮಾಡಲು ಮುಂದಾಗುತ್ತಿದ್ದಂತೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು, ಇದೊಂದು ಅನೈತಿಕ ಸರ್ಕಾರ. ಬಜೆಟ್ ಮಂಡಿಸಲು ಯಾವುದೇ ನೈತಿಕ ಹಕ್ಕು, ಅಧಿಕಾರ ಇಲ್ಲ ಎಂದು ಏರಿದ ದನಿಯಲ್ಲಿ ಹೇಳತೊಡಗಿದರು. ಇದಕ್ಕೆ ಪೂರಕವಾಗಿ ಕಾಂಗ್ರೆಸ್ ಸದಸ್ಯರು, ಇದೊಂದು ಸೀಡಿ ಸರ್ಕಾರ. ಕೆಲವರು ಕೋರ್ಟ್ 'ಬೇಲ್' ಮೇಲೆ ಹೊರಗಿದ್ದಾರೆ. ಇಂಥ ಸಚಿವರಿರುವ ಸರ್ಕಾರಕ್ಕೆ ಬಜೆಟ್ ಮಂಡಿಸಲು ಯಾವುದೇ ನೈತಿಕ ಹಕ್ಕಿಲ್ಲ ಎಂದು ಘೋಷಣೆ ಕೂಗತೊಡಗಿದರು. ಇದಕ್ಕೆ ಪ್ರತಿಯಾಗಿ ಬಿಜೆಪಿ ಸದಸ್ಯರು ಎದ್ದು ನಿಂತು 'ಜೈ ಶ್ರೀರಾಮ್' ಎಂದು ಘೋಷಣೆ ಕೂಗಿದರು, ಕಾಂಗ್ರೆಸ್‌ನ ಅನೇಕರು ಬೇಲ್ ಮೇಲಿದ್ದಾರೆ ಎಂದು ಹೇಳತೊಡಗಿದರು.



ಆಗ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು, ಸರ್ಕಾರದ ಬಜೆಟ್‌ಗೆ ವಿರೋಧಿಸುವುದು ಒಳ್ಳೆಯದಲ್ಲ, ಕಲಾಪದಲ್ಲಿ ಭಾಗವಹಿಸಿ ಎಂದು ಮನವಿ ಮಾಡಿದರು. ಆದರೆ, ಸಭಾಧ್ಯಕ್ಷರ ಮನವಿಗೆ ಸ್ಪಂದಿಸದ ಕಾಂಗ್ರೆಸ್ ಸದಸ್ಯರು, ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಾ ಸಭಾತ್ಯಾಗ ಮಾಡಿದರು.